# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## SC No. 41/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಆಯುಶ್** | **PW** – 15 |
| ತಂದೆಯ ಹೆಸರು | : | **ಶಾಜು** | **CW** – 13 |
| ವಯಸ್ಸು | : | **24 ವರ್ಷ** | |
| ವೃತ್ತಿ | : | **ಅಮೆಜಾನ್ ನಲ್ಲಿ ಕಸ್ಟಮರ್ ಸಪೊರ್ಟ್ ಕೆಲಸ** | |
| ವಾಸ | : | **ಬೆಂಗಳೂರು** | |

**ಸಾಕ್ಷಿಯನ್ನು ದಿನಾಂಕ 18-12-2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ**

1. ದಿನಾಂಕ 27.11.2023 ರಂದು ಬೆಂಗಳೂರಿನ ವಿಕ್ಟೋರಿಯ ಆಸ್ಪತ್ರೆಯಲ್ಲಿ ಮೃತ ನಂದೀಶ್ ಇವರ ಶವವನ್ನು ನೋಡಿರುತ್ತೇನೆ. ಶವದ ಮೇಲೆ ಇರುವ ಗಾಯ ನೋಡಿರುವುದಿಲ್ಲ. ಸಾಕ್ಷಿ ಶವದ ಪಂಚನಾಮೆ ಮೇಲಿರುವ ಸಹಿಯನ್ನು ಗುರುತಿಸಿದ್ದು, ಶವದ ಪಂಚನಾಮೆ ಈಗಾಗಲೇ ನಿಪಿ-25 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು **ನಿಪಿ-25(ಬಿ)** ಎಂದು ಗುರುತಿಸಲಾಯಿತು. ಶವದ ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಮೃತನು ಯಾವ ಕಾರಣಕ್ಕೆ ಮೃತ ಪಟ್ಟಿದ್ದಾನೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿ ಪೊಟೋ ನೋಡಿ ಗುರುತಿಸಿದ್ದು, ಅದನ್ನು **ನಿಪಿ-27** ಎಂದು ಗುರುತಿಸಲಾಯಿತು.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**ಪಾಟೀ ಸವಾಲು– ಸರ್ಕಾರಿ ಅಭಿಯೋಜಕರಿಂದಃ**

1. ಶವದ ಪಂಚನಾಮೆಯಲ್ಲಿ ಮೃತನಿಗೆ ತಲೆಯ ಎಡಭಾಗದಲ್ಲಿ, ಎಡ ಭುಜದ ಮೇಲೆ, ಎಡ ಕಿವಿಯ ಮೇಲೆ ಗಾಯ ಆಗಿತ್ತು ಎಂದು ನಮೂದಿಸಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿತನು ನಂದೀಶ್ ಈತನ ಜೊತೆ ಆಸ್ತಿ ವಿಚಾರದಲ್ಲಿ ಗಲಾಟೆ ಮಾಡಿ ಆತನ ಮೇಲೆ ಹಲ್ಲೆ ಮಾಡಿ ಕತ್ತಿಯಿಂದ ಕಡಿದು ಗಾಯಪಡಿಸಿದ್ದರಿಂದ ಆತನು ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯ ಆಸ್ಪತ್ರೆಗೆ ದಾಖಲಾಗಿದ್ದು, ಅಲ್ಲಿ ಆತನು ಮೃತ ಪಟ್ಟನು ಎಂದು ಪಂಚನಾಮೆಯಲ್ಲಿ ನಮೂದಾಗಿದೆ ಎಂದರೆ ನನಗೆ ಗೊತ್ತಿಲ್ಲ.

**ಪಾಟೀ ಸವಾಲು– ಆರೋಪಿ ಪರ ವಕೀಲರಾದ ಶ್ರೀ. ಓ.ಎಸ್.ಸಿ ರವರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು–ಮಡಿಕೇರಿ.